# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 439 |
| ಮಾನ್ಯ ಸದಸ್ಯರ ಹೆಸರು | ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 10.03.2025 |

**ಪ್ರಶ್ನೆ** / **ಉತ್ತರ**

**ಅ)** ರಾಜ್ಯದಲ್ಲಿರುವ ಒಟ್ಟು ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು(ಮಾಹಿತಿ ನೀಡುವುದು).

ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯಡಿ ಸಾರ್ವಜನಿಕ, ಖಾಸಗಿ ಮತ್ತು Deemed to be ವಿಶ್ವವಿದ್ಯಾಲಯಗಳು ಸೇರಿ ಒಟ್ಟು 77 ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತವೆ. (ವಿಶ್ವವಿದ್ಯಾಲಯವಾರು ವಿವರ ಅನುಬಂಧ-1ರಲ್ಲಿಸಿರಿದೆ)

**ಆ)** ಸರ್ಕಾರದ ಅಧೀನದಲ್ಲಿರುವ ಒಟ್ಟು ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು: (ಮಾಹಿತಿ ನೀಡುವುದು)

ಸರ್ಕಾರದ ಅಧೀನದಲ್ಲಿ ಈ ಕೆಳಕಂಡ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ;

1. ಸಾರ್ವಜನಿಕ ವಿಶ್ವವಿದ್ಯಾಲಯಗಳು -32
2. ಖಾಸಗಿ ವಿಶ್ವವಿದ್ಯಾಲಯಗಳು -30
3. Deemed to be ವಿಶ್ವವಿದ್ಯಾಲಯಗಳು-15

**ಇ)** ಹಿಂದಿನ ಸರ್ಕಾರದಲ್ಲಿ ಜಿಲ್ಲೆಗೊಂದರಂತೆ ಎಷ್ಟು ಹೊಸ ವಿಶ್ವವಿದ್ಯಾನಿಲಯಗಳನ್ನು ತೆರೆಯಲಾಗಿದೆ: ಈ ವಿಶ್ವವಿದ್ಯಾನಿಲಯಗಳನ್ನು ಯಾವ ಮಾನದಂಡಗಳನ್ನು ಅನುಸರಿಸಿ ತೆರಯಲಾಗಿದೆ; (ವಿವರ ನೀಡುವುದು)

ಕಳೆದ ಸರಕಾರದಲ್ಲಿ ಈ ಕೆಳಕಂಡ 12 ಹೊಸ ವಿಶ್ವವಿದ್ಯಾಲಯಗಳನ್ನು ಪ್ರಾರಂಭಿಸಲಾಗಿರುತ್ತದೆ.

| ಕ್ರ.ಸಂ. | ವಿಶ್ವವಿದ್ಯಾಲಯ | ಸ್ಥಾಪಿಸಲ್ಪಟ್ಟ ವರ್ಷ |
|---|---|---|
| 1 | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ | 2019 |
| 2 | ರಾಯಚೂರು ವಿಶ್ವವಿದ್ಯಾಲಯ, ರಾಯಚೂರು | 2019 |
| 3 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | 2019 |
| 4 | ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು | 2020 |
| 5 | ವಿಶ್ವೇಶ್ವರಯ್ಯ ಕಾಲೇಜ್ ಆಫ್ ಇಂಜಿನಿಯರಿಂಗ್ ವಿಶ್ವವಿದ್ಯಾಲಯ (UVCE) | 2021 |
| 6 | ಹಾಸನ ವಿಶ್ವವಿದ್ಯಾಲಯ, ಹಾಸನ | 2023 |
| 7 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 2023 |
| 8 | ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ | 2023 |
| 9 | ಬೀದರ್ ವಿಶ್ವವಿದ್ಯಾಲಯ, ಬೀದರ್ | 2023 |
| 10 | ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ | 2023 |
| 11 | ಕೊಡಗು ವಿಶ್ವವಿದ್ಯಾಲಯ, ಕೊಡಗು ಜಿಲ್ಲೆ | 2023 |
| 12 | ಬಾಗಲಕೋಟೆ ವಿಶ್ವವಿದ್ಯಾಲಯ, ಬಾಗಲಕೋಟೆ | 2023 |

ರಾಜ್ಯದಲ್ಲಿ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು ಯು.ಜಿ.ಸಿ.ಯು ಯಾವುದೇ ನಿರ್ದಿಷ್ಟ ಮಾನದಂಡಗಳನ್ನು ವಿವರಿಸಿರುವುದಿಲ್ಲ. ಆದರೆ, ಮೇಲ್ಕಂಡ ವಿಶ್ವವಿದ್ಯಾಲಯಗಳನ್ನು ರಾಷ್ಟ್ರೀಯ ಜ್ಞಾನ ಆಯೋಗ, ರೂಸಾ ಮತ್ತು ಹೊಸ ಶಿಕ್ಷಣ ನೀತಿ 2020 ಹೆಚ್ಚಿನ ಸಂಖ್ಯೆಯ ವಿಶ್ವವಿದ್ಯಾಲಯಗಳು ಮತ್ತು ಸ್ವಾಯತ್ತ ಪದವಿ ನೀಡುವ ಸಂಸ್ಥೆಗಳನ್ನು ಸ್ಥಾಪಿಸಲು ಶಿಫಾರಸ್ಸಿನನ್ವಯ ಹಾಗೂ ಪ್ರೊ.ಡಿ.ಎಂ.ನಂಜುಂಡಪ್ಪ ವರದಿ 2014 ರನ್ವಯ ರಾಜ್ಯದಲ್ಲಿನ ಕೆಲವು ಜಿಲ್ಲೆಗಳು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದ ಜಿಲ್ಲೆಗಳ ವರ್ಗಕ್ಕೆ ಸೇರಿದ್ದು, ಈ ಜಿಲ್ಲೆಗಳಲ್ಲಿ ಬಾಲಕಿಯರ ಮತ್ತು ಎಸ್‌ಸಿ / ಎಸ್‌ಟಿ

| | | |
|---|---|---|
| | | GER ಪ್ರಮಾಣ ನಿರಂತರ ಕಡಿಮೆಯಾಗುತ್ತಿರುವುದು ಹಾಗೂ ಕೆಲವು ಜಿಲ್ಲೆಗಳಲ್ಲಿ ಪ್ರತಿ ಲಕ್ಷ ಜನಸಂಖ್ಯೆಗೆ ಕಾಲೇಜುಗಳ ಸಂಖ್ಯೆ ಐದಕ್ಕಿಂತ ಕಡಿಮೆ ಇರುವುದು ಪರಿಗಣಿಸಿ ಉನ್ನತ ಶಿಕ್ಷಣ ಮತ್ತು ಸಂಶೋಧನೆಯ ಗುಣಮಟ್ಟವನ್ನು ಹೆಚ್ಚಿಸಲು ಸಂಯೋಜನೆ ವ್ಯವಸ್ಥೆಯ ಪರಿಕಲ್ಪನೆ, ಶೈಕ್ಷಣಿಕ, ಆಡಳಿತ ಮತ್ತು ಸಮನ್ವಯದಲ್ಲಿ ಸುಧಾರಣೆಗಳನ್ನು ತರುವಲ್ಲಿ ನೂತನ ವಿಶ್ವವಿದ್ಯಾಲಯಗಳನ್ನು ಪ್ರಾರಂಭಿಸಲಾಗಿರುತ್ತದೆ. |
| ಈ) | ಅಂತಹ ಕೆಲವು ವಿಶ್ವವಿದ್ಯಾನಿಲಗಳನ್ನು ಮುಚ್ಚಲು ಸರ್ಕಾರ ತೀರ್ಮಾನಿಸಿದೆಯೇ; ಹಾಗಿದ್ದಲ್ಲಿ. ಯಾವ ಮಾನದಂಡಗಳ ಆಧಾರದ ಮೇಲೆ ಈ ತೀರ್ಮಾನ ತೆಗೆದುಕೊಳ್ಳಲಾಗುತ್ತಿದೆ; (ವಿವರ ನೀಡುವುದು) | ರಾಜ್ಯದಲ್ಲಿನ ಯಾವುದೇ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಸರ್ಕಾರವು ತೀರ್ಮಾನಿಸಿರುವುದಿಲ್ಲ.<br><br>ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸನ್ಮಾನ್ಯ ಉಪಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ಈ ಬಗ್ಗೆ ಸಭೆ ನಡೆಸಿದ್ದು, ವಿಶ್ವವಿದ್ಯಾಲಯಗಳು ಎದುರಿಸುತ್ತಿರುವ ಎಲ್ಲಾ ಸಮಸ್ಯೆಗಳೊಂದಿಗೆ ರಾಜ್ಯದಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಅವರ ಮುಂಬರುವ ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ಕೆಲವು ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ, ವಿದ್ಯಾರ್ಥಿಗಳ ಪ್ರವೇಶಾತಿ, ಮೂಲಸೌಲಭ್ಯದ ಕೊರತೆ ಮುಂತಾದ ಪ್ರಮುಖ ಅಂಶಗಳ ಕುರಿತು ಮೊದಲ ಸಭೆಯಲ್ಲಿ ಚರ್ಚಿಸಲಾಗಿದ್ದು, ಸಭೆಯಲ್ಲಿ ಸ್ವೀಕೃತವಾದ ಸಲಹೆಗಳನ್ನು ಪರಾಮರ್ಶಿಸಿ ಕೆಲವು ವಿಶ್ವವಿದ್ಯಾಲಯಗಳ ವಿಲೀನ, ಹೆಚ್ಚಿನ ಅನುದಾನದ ಅಗತ್ಯತೆ ಮತ್ತು ಹಂತ-ಹಂತವಾಗಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಉನ್ನತ ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಒಟ್ಟಾರೆ ಸೇರಿ ವಿಸ್ತೃತವಾದ ವರದಿ/ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಮಂಡಿಸಿ ಸೂಕ್ತ ತೀರ್ಮಾನ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |
| ಉ) | ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಆಯಾ ಜಿಲ್ಲೆಯಲ್ಲಿ ಸರ್ಕಾರಿ ಜಮೀನು ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯವಿರುವ ವಿಶ್ವವಿದ್ಯಾನಿಲಯಗಳನ್ನು ಮುಂದುವರಿಸಲು ಸರ್ಕಾರಕ್ಕಿರುವ ತೊಂದರೆಗಳೇನು? (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಇಡಿ 81 ಯುಎನ್ಇ 2022, ದಿನಾಂಕ: 18.04.2022ರಲ್ಲಿ ವಿಧಿಸಿರುವ ಷರತ್ತುಗಳನ್ವಯ ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ. |

ಸಂಖ್ಯೆ: ಇಡಿ 84 ಯುಎನ್ಇ 2025

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು

# ಅನುಬಂಧ-1

## ಸಾರ್ವಜನಿಕ ವಿಶ್ವವಿದ್ಯಾಲಯಗಳು

| ಕ್ರ. ಸಂ. | ವಿಶ್ವವಿದ್ಯಾಲಯಗಳ ಹೆಸರು |
|---|---|
| 1 | ಮೈಸೂರು ವಿಶ್ವವಿದ್ಯಾಲಯ ಮೈಸೂರು. |
| 2 | ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ |
| 3 | ಬೆಂಗಳೂರು ವಿಶ್ವವಿದ್ಯಾಲಯ ಬೆಂಗಳೂರು |
| 4 | ಗುಲ್ಬರ್ಗ ವಿಶ್ವವಿದ್ಯಾಲಯ ಕಲಬುರಗಿ |
| 5 | ಮಂಗಳೂರು ವಿಶ್ವವಿದ್ಯಾಲಯ ಬೆಂಗಳೂರು |
| 6 | ಕುವೆಂಪು ವಿಶ್ವವಿದ್ಯಾಲಯ ಶಂಕರಘಟ್ಟ ಶಿವಮೊಗ್ಗ |
| 7 | ಕನ್ನಡ ವಿಶ್ವವಿದ್ಯಾಲಯ ಹಂಪಿ. |
| 8 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಮೈಸೂರು |
| 9 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಬೆಳಗಾವಿ. |
| 10 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ವಿಜಯಪುರ |
| 11 | ತುಮಕೂರು ವಿಶ್ವವಿದ್ಯಾಲಯ ತುಮಕೂರು |
| 12 | ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ ಮೈಸೂರು |
| 13 | ದಾವಣಗೆರೆ ವಿಶ್ವವಿದ್ಯಾಲಯ ದಾವಣಗೆರೆ. |
| 14 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ ಬಳ್ಳಾರಿ. |
| 15 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಬೆಳಗಾವಿ. |
| 16 | ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ ಬೆಂಗಳೂರು |
| 17 | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿ ಶಿಗ್ಗಾವಿ ತಾಲ್ಲೂಕು ಹಾವೇರಿ ಜಿಲ್ಲೆ. |
| 18 | ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ ಸೆಂಟ್ರಲ್ ಕಾಲೇಜು ಆವರಣ ಬೆಂಗಳೂರು. |
| 19 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ತಮಕಾ ಕೋಲಾರ ಜಿಲ್ಲೆ. |
| 20 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ ಬೆಂಗಳೂರು. |
| 21 | ಮಂಡ್ಯ ವಿಶ್ವವಿದ್ಯಾಲಯ ಮಂಡ್ಯ. |
| 22 | ಡಾ. ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ ಬೆಂಗಳೂರು. |
| 23 | ರಾಯಚೂರು ವಿಶ್ವವಿದ್ಯಾಲಯ ಯರಗೇರಾ ರಾಯಚೂರು. |
| 24 | ನೃಪತುಂಗ ವಿಶ್ವವಿದ್ಯಾಲಯ ಬೆಂಗಳೂರು. |
| 25 | ಹಾಸನ ವಿಶ್ವವಿದ್ಯಾಲಯ ಹಾಸನ |
| 26 | ಹಾವೇರಿ ವಿಶ್ವವಿದ್ಯಾಲಯ ಹಾವೇರಿ |
| 27 | ಕೊಪ್ಪಳ ವಿಶ್ವವಿದ್ಯಾಲಯ ಕೊಪ್ಪಳ |
| 28 | ಬೀದರ್ ವಿಶ್ವವಿದ್ಯಾಲಯ ಬೀದರ್ |
| 29 | ಚಾಮರಾಜ ನಗರ ವಿಶ್ವವಿದ್ಯಾಲಯ ಚಾಮರಾಜನಗರ |
| 30 | ಕೊಡಗು ವಿಶ್ವವಿದ್ಯಾಲಯಕೊಡಗು ಜಿಲ್ಲೆ. |
| 31 | ಬಾಗಲಕೋಟೆ ವಿಶ್ವವಿದ್ಯಾಲಯ ಬಾಗಲಕೋಟೆ |
| 32 | ನಿರ್ದೇಶಕರು ವಿಶ್ವೇಶ್ವರಯ್ಯ ಕಾಲೇಜ್ ಆಫ್ ಇಂಜಿನಿಯರಿಂಗ್ ಬೆಂಗಳೂರು. |

## ರಾಜ್ಯದ ಖಾಸಗಿ ವಿಶ್ವವಿದ್ಯಾಲಗಳು

| ಕ್ರ. ಸಂ. | ವಿಶ್ವವಿದ್ಯಾಲಯಗಳ ಹೆಸರು |
|---|---|
| 1 | ಅಲಿಯನ್ಸ್ ವಿಶ್ವವಿದ್ಯಾಲಯ, ಬೆಂಗಳೂರು. |
| 2 | ಅಜೀಮ್ ಪ್ರೇಮ್‌ಜಿ ವಿಶ್ವವಿದ್ಯಾಲಯ, ಬೆಂಗಳೂರು |
| 3 | ಪ್ರಸಿಡೆನ್ಸಿ ವಿಶ್ವವಿದ್ಯಾಲಯ, ಬೆಂಗಳೂರು |
| 4 | ಸಿ.ಎಂ.ಆರ್. ವಿಶ್ವವಿದ್ಯಾಲಯ, ಬೆಂಗಳೂರು. |
| 5 | ಪಿ.ಇ.ಎಸ್. ವಿಶ್ವವಿದ್ಯಾಲಯ, ಬೆಂಗಳೂರು |
| 6 | ಎಂ.ಎಸ್. ರಾಮಯ್ಯ ಯುನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸ್ ಸ್, ಬೆಂಗಳೂರು. |
| 7 | ರೇವಾ ವಿಶ್ವವಿದ್ಯಾಲಯ, ಬೆಂಗಳೂರು |
| 8 | ದಯಾನಂದ ಸಾಗರ ವಿಶ್ವವಿದ್ಯಾಲಯ, ಬೆಂಗಳೂರು. |
| 9 | ರೈ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು |
| 10 | ಕೆ.ಎಲ್.ಇ ವಿಶ್ವವಿದ್ಯಾಲಯ, ಹುಬ್ಬಳ್ಳಿ. |
| 11 | ಜೆ.ಎಸ್.ಎಸ್. ತಾಂತ್ರಿಕ ವಿಶ್ವವಿದ್ಯಾಲಯ, ಮೈಸೂರು. |
| 12 | ಗಾರ್ಡನ್ ಸಿಟಿ ವಿಶ್ವವಿದ್ಯಾಲಯ, ಬೆಂಗಳೂರು |
| 13 | ಶ್ರೀನಿವಾಸ ವಿಶ್ವವಿದ್ಯಾಲಯ, ಮಂಗಳೂರು. |
| 14 | ಶರಣ ಬಸವ ವಿಶ್ವವಿದ್ಯಾಲಯ, ಕಲಬುರಗಿ |
| 15 | ಶ್ರೀ ಆದಿಚುಂಚನಗಿರಿ ವಿಶ್ವವಿದ್ಯಾಲಯ, ನಾಗಮಂಗಲ |
| 16 | ಖಾಜ ಬಂದಾನಾಜ್ ವಿಶ್ವವಿದ್ಯಾಲಯ, ಕಲಬುರಗಿ |
| 17 | ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ, ಧಾರವಾಡ. |
| 18 | ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ, ಕಲಬುರಗಿ |
| 19 | ಎನ್.ಐ.ಇ ವಿಶ್ವವಿದ್ಯಾಲಯ, ಮೈಸೂರು |
| 20 | ಆರ್.ವಿ. ವಿಶ್ವವಿದ್ಯಾಲಯ, ಬೆಂಗಳೂರು |
| 21 | ಐಟ್ರಿಯಾ ವಿಶ್ವವಿದ್ಯಾಲಯ, ಬೆಂಗಳೂರು |
| 22 | ಚಾಣುಕ್ಯ ವಿಶ್ವವಿದ್ಯಾಲಯ, ಬೆಂಗಳೂರು |
| 23 | ಶ್ರೀ ಜಗದ್ಗುರು ಮುರುಘರಾಜೇಂದ್ರ ವಿಶ್ವವಿದ್ಯಾಲಯ, ಚಿತ್ರದುರ್ಗ |
| 24 | ವಿದ್ಯಾಶಿಲ್ಪ ವಿಶ್ವವಿದ್ಯಾಲಯ, ಬೆಂಗಳೂರು. |
| 25 | ಸೈಂಟ್ ಜೋಸೆಫ್ಸ್ ವಿಶ್ವವಿದ್ಯಾಲಯ, ಬೆಂಗಳೂರು. |
| 26 | ಕಿಷ್ಕಿಂದ ವಿಶ್ವವಿದ್ಯಾಲಯ, ಬಳ್ಳಾರಿ. |
| 27 | ಜಿ.ಎಂ. ವಿಶ್ವವಿದ್ಯಾಲಯ, ದಾವಣಗೆರೆ |
| 28 | ಅಮಿಟಿ ವಿಶ್ವವಿದ್ಯಾಲಯ, ಬೆಂಗಳೂರು |
| 29 | ಸಪ್ತಗಿರಿ ಎನ್.ಪಿ.ಎಸ್. ವಿಶ್ವವಿದ್ಯಾಲಯ, ಬೆಂಗಳೂರು |
| 30 | ಬಿ.ಎಂ.ಎಸ್. ವಿಶ್ವವಿದ್ಯಾಲಯ, ಬೆಂಗಳೂರು |

## ಡೀಮ್ಡ್ ವಿಶ್ವವಿದ್ಯಾಲಗಳು

| ಕ್ರ. ಸಂ. | ವಿಶ್ವವಿದ್ಯಾಲಯಗಳ ಹೆಸರು |
|---|---|
| 1 | ಜೈನ್ ವಿಶ್ವವಿದ್ಯಾಲಯ, ಬೆಂಗಳೂರು. |
| 2 | ಕ್ರೈಸ್ಟ್ ವಿಶ್ವವಿದ್ಯಾಲಯ, ಬೆಂಗಳೂರು |
| 3 | ಯೆನೆಪೋಯ ವಿಶ್ವವಿದ್ಯಾಲಯ, ದೇರಳಕಟ್ಟೆ, ಮಂಗಳೂರು |
| 4 | ಸ್ವಾಮಿ ವಿವೇಕಾನಂದ ಯೋಗ ಅನುಸಂಧಾನ ಸಂಸ್ಥಾನ ಗಿಡ್ಡೇನಹಳ್ಳಿ, ಬೆಂಗಳೂರು. |
| 5 | ಶ್ರೀ ಸಿದ್ಧಾರ್ಥ ಅಕಾಡೆಮಿ ಆಫ್ ಹೈಯರ್ ಎಜುಕೇಷ್ನ, ಅಗಲಕೋಟೆ. |
| 6 | ಶ್ರೀ ದೇವರಾಜ ಅರಸ್ ಅಕಾಡೆಮಿ ಆಫ್ ಹೈಯರ್ ಎಜುಕೇಷನ್ ಅಂಡ್ ರೀಸರ್ಚ್ , ಕೋಲಾರ, |
| 7 | ನಿಟ್ಟೆ ವಿಶ್ವವಿದ್ಯಾಲಯ, ಮಂಗಳೂರು. |
| 8 | ಮಣಿಪಾಲ ಅಕಾಡೆಮಿ ಆಫ್ ಹೈಯರ್ ಎಜುಕೇಷನ್, ಮಣಿಪಾಲ |
| 9 | ಕೆ.ಎಲ್.ಇ ಅಕಾಡೆಮಿ ಆಫ್ ಹೈಯರ್ ಎಜುಕೇಷನ್ ಅಂಡ್ ರೀಸರ್ಚ್, ಬೆಳಗಾಂ. |
| 10 | ಜವಾರಹರ್‌ಲಾಲ್ ನೆಹರು ಸೆಂಟರ್ ಫಾರ್ ಅಡ್ವಾನ್ಸಡ್ ಸೈಂಟಿಫಿಕ್ ರೀಸರ್ಚ್, ಜಕ್ಕೂರು, ಬೆಂಗಳೂರು. |
| 11 | ಜಗದ್ಗುರು ಶ್ರೀ ಶವರಾತ್ರೀಶ್ವರ ವಿಶ್ವವಿದ್ಯಾಲಯ, ಮೈಸೂರು. |
| 12 | ಇಂಟರ್‌ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಇನ್‌ಫರ್ಮೇಶನ್ ಟೆಕ್ನಾಲಜಿ, ಬೆಂಗಳೂರು. |
| 13 | ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್, ಬೆಂಗಳೂರು. |
| 14 | ಬಿ.ಎಲ್.ಡಿ.ಇ ವಿಶ್ವವಿದ್ಯಾಲ, ಬಿಜಾಪುರ |
| 15 | ಆಂದ್ರ ಪ್ರದೇಶದ ವಿಶಾಖಪಟ್ಟಣದಲ್ಲಿ ಕೇಂದ್ರ ಸ್ಥಾನ ಹೊಂದಿರುವ ಡೀಮ್ಡ್ ವಿಶ್ವವಿದ್ಯಾಲಯವಾದ ಗಾಂಧಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್ ಮೆಂಟ್ (GITAM) ಇದರ ಆಫ್ ಕ್ಯಾಂಪಸ್ ಸೆಂಟರ್ ಬೆಂಗಳೂರಿನಲ್ಲರುತ್ತದೆ. |